# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/08/2020-21 ದಿನಾಂಕ : 20/02/2021

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 20/02/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿ ಗೌಡರ್, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಸೋಮನಾಥ್ ಎಸ್ ಜಾಧವ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಉದಯ್ ಕುಮಾರ್, ನೀರು ಪರಿವೀಕ್ಷಕರು, ಬಿಡಬ್ಲ್ಯೂಎಸ್ಎಸ್‌ಬಿ

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

**ಶ್ರೀ ಸೋಮನಾಥ್ ಎಸ್ ಜಾಧವ್, ಸಹಾಯಕ ಅಭಿಯಂತರರು:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡ್‌ಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು**

ಕೆನರಾ ಬ್ಯಾಂಕ್ ಲೇಔಟ್‌ನಲ್ಲಿ ಯಾವುದೇ ಮಾಹಿತಿ ನೀಡದೆ ವಾಟರ್ ಮೀಟರ್ ತೆಗೆದುಕೊಂಡು ಹೋಗಿರುತ್ತಾರೆ, ಬಿ.ಇ.ಎಲ್ ಬಡಾವಣೆಯಲ್ಲಿ ನೀರಿನ ಪೈಪ್‌ಲೈನ್ ಬದಲಾಯಿಸಲು ಕೋರಿ, ಹೆಚ್.ಎಂ.ಟಿ ಲೇಔಟ್, ಬಿ.ಇ.ಎಲ್ 6ನೇ ಬ್ಲಾಕ್ ನಲ್ಲಿ ಉಬ್ಬು ಇರುವ ಮನೆಗಳಿಗೆ ಸರಿಯಾಗಿ ನೀರು ಸರಬರಾಜಾಗುತ್ತಿರುವುದಿಲ್ಲ ಆದ್ದರಿಂದ ವಾಟರ್ ಮೆನ್ ಗಮನಹರಿಸಲು ಕೋರಿದರು. ಸೋಮಣ್ಣ ಗಾರ್ಡನ್ ಬೋರ್‌ವೆಲ್ ಹಾಳಾಗಿದ್ದು, ರಸ್ತೆ ಮಟ್ಟಕ್ಕಿಂತ ಎತ್ತರದಲ್ಲಿರುವುದರಿಂದ ಸರಿಪಡಿಸುವುದು, ದೊಡ್ಡಬೊಮ್ಮಸಂದ್ರ ಕೃಷ್ಣ ದೇವಸ್ಥಾನದ ರಸ್ತೆಯಲ್ಲಿ ಕೊಳವೆ ಬಾವಿಯ ವೈರ್ ಹಾಳಾಗಿದ್ದು ಸರಿಪಡಿಸುವುದು, ಹೆಚ್.ಎಂ.ಟಿ ಅಸೋಸಿಯೇಷನ್ ಹತ್ತಿರ ಕೊಳವೆ ಬಾವಿ ದುರಸ್ಥಿಯನ್ನು ಸರಿಪಡಿಸಲು ಕೋರಿದರು. ಎನ್.ಟಿ.ಐ ಲೇಔಟ್ ರಾಜೀವ್‌ಗಾಂಧಿನಗರ ಅಂಡರ್ ಪಾಸ್ ಹತ್ತಿರ ಒಳಚರಂಡಿ ನೀರು ರಸ್ತೆಗೆ ಹರಿಯುತ್ತಿರುವುದರಿಂದ ಸ್ವಚ್ಚತಾ ಕಾರ್ಯ ಮಾಡುವುದು

**ಕ್ರಮ: ಸಕಾಅ, ಬಿಡಬ್ಲ್ಯೂಎಸ್‌ಎಸ್‌ಬಿ**

ಸೋಮಣ್ಣ ಗಾರ್ಡನ್, ಸಪ್ತಗಿರಿ ಬಡಾವಣೆ, ಹೆಚ್.ಎಂ.ಟಿ ಲೇಔಟ್ 7ನೇ ಬ್ಲಾಕ್, ಗುರುದರ್ಶನ್ ಲೇಔಟ್, ಸರ್ ಎಂ.ವಿ ಬಡಾವಣೆ 5ನೇ ಅಡ್ಡರಸ್ತೆಯಲ್ಲಿ ರಸ್ತೆಗೆ ಹಾಗೂ ಮನೆಗೆ ಅಡ್ಡಲಾಗಿ ಬೆಳೆದಿರುವ ಮರದ ರೆಂಬೆ ಕೊಂಬೆಗಳನ್ನು ಟ್ರಿಮ್ ಮಾಡಲು ಕೋರಿದರು. ಬೆಸ್ಕಾಂ ರವರು ಕತ್ತರಿಸಿದ ಮರದ ರೆಂಬೆ ಕೊಂಬೆಗಳನ್ನು ಅಲ್ಲಿಯೇ ಬಿಟ್ಟು ಹೋಗುತ್ತಿರುವುದರಿಂದ ತೆರವುಗೊಳಿಸಲು ಕೋರಿದರು.

**ಕ್ರಮ: ವಲಯ ಅರಣ್ಯಾಧಿಕಾರಿಗಳು, ಬ್ಯಾಟರಾಯನಪುರ**

ಹೆಚ್.ಎಂ.ಟಿ 6ನೇ ಬ್ಲಾಕ್‌ನಲ್ಲಿ ಚರಂಡಿ ಸಮಸ್ಯೆಯಿರುವುದರಿಂದ ಸರಿಪಡಿಸಲು ಕೋರಿದರು.
**ಕ್ರಮ: ಸಕಾಅ, ವಿ.ಉ.ವಿ**

ವಿದ್ಯಾರಣ್ಯಪುರ ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಕಾರ್ಯವು ಉತ್ತಮ ರೀತಿಯಲ್ಲಿ ನಡೆಯುತ್ತಿರುವುದಾಗಿ ಪ್ರಶಂಸೆ ವ್ಯಕ್ತಪಡಿಸಿದರು. ಬಿ.ಇ.ಎಲ್ ಬಡಾವಣೆ 6ನೇ ಬ್ಲಾಕ್ ನಲ್ಲಿ ಕಸ ಹಾಕುತ್ತಿರುವುದರಿಂದ ತಡೆಯಲು ಕೋರಿದರು
**ಕ್ರಮ: ಸಕಾಅ, ಘ.ತ್ಯಾ.ನಿ**

**ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್) :-**

- ಚಿಕ್ಕಮಕ್ಕಳು, ಯುವಕರು ಹಾಗೂ ವಯಸ್ಕರು ಕುಡಿತ, ಗಾಂಜಾ ಸೇವನೆ ಹಾಗೂ ಇನ್ನಿತರೆ ಮಾದಕ ವ್ಯಸನಗಳಿಗೆ ಬಲಿಯಾಗುತ್ತಿರುವುದರಿಂದ ಮನೆಯಲ್ಲಿ ತಂದೆ ತಾಯಿ ಮಕ್ಕಳ ಚಟುವಟಿಕೆಗಳನ್ನು ಗಮನಹರಿಸತಕ್ಕದ್ದು,
- ರಸ್ತೆಯಲ್ಲಿ ಸರಗಳ್ಳತನ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಸಾರ್ವಜನಿಕರು ಎಚ್ಚರ ವಹಿಸುವುದು,
- ಅಪರಿಚಿತರ ಮನೆಯ ಹತ್ತಿರ ಬಂದಾಗ ತುರ್ತಾಗಿ ಪೋಲೀಸ್ ಠಾಣೆಗೆ ಅಥವಾ ಪಕ್ಕದ ಮನೆಯವರಿಗೆ ಮಾಹಿತಿ ನೀಡುವುದು.

**ನೋಡೆಲ್ ಅಧಿಕಾರಿ:** ಶ್ರೀ ಶಿವಕುಮಾರ್ ಗೌಡರ್ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ

Assistant Executive Engineer
Vidyaranyapura Sub-Division
BBMP, Bangalore-97

ಪ್ರತಿಯನ್ನು:
1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.